ರಾಜ್ಯದಲ್ಲಿ ಉತ್ಪಾದನೆ ಯಾಗುತ್ತಿರುವ ವಿದ್ಯುತ್ ಪ್ರಮಾಣ

254(525); ಶ್ರೀ ಡಾ॥ ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ಪ್ರಸ್ತುತ ರಾಜ್ಯದಲ್ಲಿ ಉತ್ಪಾನೆಯಾಗುತ್ತಿರುವ ವಿದ್ಯುತ್‌ನ ಪ್ರಮಾಣವೆಷ್ಟು;

ಆ) ಹಳ್ಳಿಗಾಡು ಪ್ರದೇಶಗಳಲ್ಲಿ ಪ್ರತಿ ವರ್ಷವು ಲೋಡ್‌ಶೆಡ್ಡಿಂಗ್ ಸಮಸ್ಯೆಯನ್ನು ಎದುರಿಸುತ್ತಿದ್ದಾರೆಯೇ;

ಇ) ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ನಿರ್ಧಾರವೇನು;

ಈ) ಕೊರತೆಯಿರುವ ವಿದ್ಯುತ್ ಉತ್ಪಾದನೆಗಾಗಿ ಸರ್ಕಾರ ಯಾವುದಾದರೂ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯವೇ?

ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು)

ಅ) ಪ್ರಸ್ತುತ ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಲಭ್ಯವಿರುವ ವಿದ್ಯುತ್‌ನ ಪ್ರಮಾಣ ಪ್ರತಿದಿನ ಸರಾಸರಿ 155 ದಶಲಕ್ಷ ಯೂನಿಟ್‌ಗಳಷ್ಟು ಹಾಗೂ ಗರಿಷ್ಟ 168 ದಶಲಕ್ಷ ಯೂನಿಟ್‌ಗಳಷ್ಟಾಗಿರುತ್ತದೆ.

ಆ) ರಾಜ್ಯದಲ್ಲಿ ಅಧಿಕೃತ ಘೋಷಿತ ಲೋಡ್ ಶೆಡ್ಡಿಂಗ್ ಜಾರಿಯಲ್ಲಿ ಇರುವುದಿಲ್ಲ.

ವಿದ್ಯುತ್ ಉತ್ಪಾದನಾ ಘಟಕಗಳಲ್ಲಿ ತಾಂತ್ರಿಕ ಹಾಗೂ ಇನ್ನಿತರೆ ಕಾರಣಗಳಿಂದ ವಿದ್ಯುತ್ ಉತ್ಪಾದನಾ ಘಟಕಗಳು ಹಠಾತ್ ಸ್ಥಗಿತಗೊಂಡಾಗ ಮಾತ್ರ ಅನಿವಾರ್ಯವಾಗಿ ಸ್ವಲ್ಪ ಪ್ರಮಾಣದ ವಿದ್ಯುತ್ ಕಡಿತ ಮಾಡಲಾಗುತ್ತದೆ.

ಇ) **ಮತ್ತು ಈ**) ವಿದ್ಯುತ್ ಕೊರತೆಯನ್ನು ನೀಗಿಸಲು ಹೆಚ್ಚುವರಿ ವಿದ್ಯುತ್ತನ್ನು ಖಾಸಗಿ ವಿದ್ಯುತ್ ಉತ್ಪಾದಕರಿಂದ ಹಾಗೂ ಹೊರ ರಾಜ್ಯಗಳಿಂದ ಹೆಚ್ಚುವರಿಯಾಗಿ ಖರೀದಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆ. ಹಾಗೂ ವಿದ್ಯುತ್ ಸ್ವಾವಲಂಬನೆಗಾಗಿ ಹಲವು ದೀರ್ಘಾವಧಿ ಯೋಜನೆಗಳನ್ನು ರೂಪಿಸಲಾಗಿದೆ.